**All India Radio: Bangalore**
**Regional Bulletin In Kannada**
**17.07.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**17.07.2025 / 2.30 p.m.**
**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿ ಸ್ವಚ್ಛ ಸರ್ವೇಕ್ಷಣ ಪ್ರಶಸ್ತಿ ಪ್ರದಾನ ; ೩ರಿಂದ ೧೦ ಲಕ್ಷ ಜನಸಂಖ್ಯೆ ವಿಭಾಗದಲ್ಲಿ ಮೈಸೂರಿಗೆ ೩ನೇ ಸ್ಥಾನ
2. ಆರ್‌ಸಿಬಿ ಅಭಿಮಾನಿಗಳನ್ನು ಆಹ್ವಾನಿಸಿದ್ದೇ ಕಾಲ್ತುಳಿತಕ್ಕೆ ಕಾರಣ ; ಹೈಕೋರ್ಟ್‌ಗೆ ಸರ್ಕಾರದ ವರದಿ
3. ಸಹಕಾರಿ ಬ್ಯಾಂಕ್ ವಂಚನೆ ಪ್ರಕರಣ ; ಬೆಂಗಳೂರಿನ ವಿವಿಧೆಡೆ ಇಡಿ ಅಧಿಕಾರಿಗಳಿಂದ ದಾಳಿ
4. ಕರಾವಳಿ ಸೇರಿದಂತೆ ರಾಜ್ಯದ ಹಲವೆಡೆ ಧಾರಾಕಾರ ಮಳೆ ; ಹಳದಿ ಅಲರ್ಟ್ ಘೋಷಣೆ
5. ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ನಾಡ ಅಧಿದೇವತೆ ಚಾಮುಂಡೇಶ್ವರಿ ವರ್ಧಂತಿ ಉತ್ಸವ ; ಲಕ್ಷಾಂತರ ಭಕ್ತರು ಭಾಗಿ

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ನವದೆಹಲಿಯಲ್ಲಿಂದು ಸ್ವಚ್ಛ ಸರ್ವೇಕ್ಷಣಾ ೨೦೨೪-೨೫ರ ಪ್ರಶಸ್ತಿ ಪ್ರದಾನ ಮಾಡಿದರು. ಈ ಬಾರಿ ಸತತ ೮ನೇ ಬಾರಿಗೆ ಇಂದೋರ್ ಅತ್ಯಂತ ಸ್ವಚ್ಛ ನಗರ ಎಂಬ ಪಟ್ಟ ಉಳಿಸಿಕೊಂಡಿದೆ. ಸೂರತ್ ೨ನೇ ಸ್ಥಾನ ಪಡೆದುಕೊಂಡರೆ, ನವಿ ಮುಂಬೈ ೩ನೇ ಸ್ಥಾನ ಪಡೆದುಕೊಂಡಿದೆ. ಮೂರರಿಂದ ೧೦ ಲಕ್ಷ ಜನಸಂಖ್ಯೆಯ ವಿಭಾಗದಲ್ಲಿ ನೊಯ್ಡಾ ಸ್ವಚ್ಛ ನಗರವಾಗಿ ಅಗ್ರಸ್ಥಾನ ಪಡೆದುಕೊಂಡರೆ, ಚಂಡೀಗಢ ೨ನೇ ಸ್ಥಾನ, ಮೈಸೂರು ೩ನೇ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿದೆ. ರಾಷ್ಟ್ರ ಮಟ್ಟದ ಸಚಿವಾಲಯದ ಪ್ರಶಸ್ತಿಗೆ ದಾವಣಗೆರೆ ಮಹಾನಗರ ಪಾಲಿಕೆ ಭಾಜನವಾಗಿದೆ.

<><><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಆರ್‌ಸಿಬಿ ಆಡಳಿತ ಮಂಡಳಿ ಅಭಿಮಾನಿಗಳನ್ನು ಆಹ್ವಾನಿಸಿದ್ದೆ ದುರಂತಕ್ಕೆ ಕಾರಣ ಎಂದು ಸರ್ಕಾರ ಉಚ್ಚನ್ಯಾಯಾಲಯಕ್ಕೆ ವರದಿ ಸಲ್ಲಿಸಿದೆ. ಜೂನ್ ೪ ರಂದು ಪೊಲೀಸ್ ಇಲಾಖೆಯ ಒಪ್ಪಿಗೆ ಇಲ್ಲದೇ ಆರ್‌ಸಿಬಿ ತಮ್ಮ ಅಧಿಕೃತ ಸಾಮಾಜಿಕ ಜಾಲತಾಣ ಖಾತೆಗಳಲ್ಲಿ ಉಚಿತ ಪ್ರವೇಶವನ್ನು ಘೋಷಿಸಿತ್ತು. ಈ ಹಿನ್ನೆಲೆಯಲ್ಲಿ ಜನರು ಸಾಗರೋಪಾದಿಯಲ್ಲಿ ಆಗಮಿಸಿರುವುದರಿಂದ ಕಾಲ್ತುಳಿತ ಸಂಭವಿಸಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ಜೊತೆಗೆ ಉಚಿತ ಪಾಸ್‌ಗಳ ಬಗ್ಗೆಯೂ ಆರ್‌ಸಿಬಿ ಮಾಹಿತಿ ನೀಡಿದ್ದು, ಇದನ್ನು ೪೪ ಲಕ್ಷಕ್ಕೂ ಅಧಿಕ ಮಂದಿ ವೀಕ್ಷಿಸಿದ್ದರು ಎಂದು ಉಲ್ಲೇಖಿಸಲಾಗಿದೆ. ಕಾಲ್ತುಳಿತದಲ್ಲಿ ೧೧ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿದ್ದು, ೫೦ ಮಂದಿ ಗಾಯಗೊಂಡಿದ್ದರು.

<><><><>

ಬೆಂಗಳೂರಿನ ಶುಶ್ರುತಿ ಸಹಕಾರಿ ಸಂಘ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಬೆಂಗಳೂರಿನ ವಿವಿಧೆಡೆ ದಾಳಿ ನಡೆಸಿದ್ದಾರೆ. ಬ್ಯಾಂಕ್‌ನ ಪ್ರವರ್ತಕರಾದ ಎಸ್. ಶ್ರೀನಿವಾಸ

ಮೂರ್ತಿ ಮತ್ತು ಅವರ ಕುಟುಂಬ ಸದಸ್ಯರಿಗೆ ಸೇರಿದ ಹಲವೆಡೆ ಇಡಿ ಅಧಿಕಾರಿಗಳು ಶೋಧ ನಡೆಸುತ್ತಿದ್ದಾರೆ. ಸುಮಾರು ೧೫ ಸಾವಿರಕ್ಕೂ ಹೆಚ್ಚು ಠೇವಣಿದಾರರಿಂದ ನೂರು ಕೋಟಿ ರೂಪಾಯಿಗಳಿಗೂ ಹೆಚ್ಚು ವಂಚನೆ ಆರೋಪ ಕೇಳಿ ಬಂದಿದೆ. ಹೆಚ್ಚಿನ ಬಡ್ಡಿದರಗಳ ಭರವಸೆ ನೀಡಿ, ಹೂಡಿಕೆ ಮಾಡುವಂತೆ ಆಮಿಷ ಒಡ್ಡಲಾಗಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ೨೦೨೨ರಲ್ಲಿ ಬೆಂಗಳೂರು ಕೇಂದ್ರ ಅಪರಾಧ ವಿಭಾಗ ಸಹಕಾರಿ ಸಂಘದ ವಿರುದ್ಧ ಪ್ರಕರಣ ದಾಖಲಿಸಿತ್ತು.

<><><><>

ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ವ್ಯಾಪಕ ಮಳೆಯಾಗಿದೆ. ದಕ್ಷಿಣಕನ್ನಡ ಜಿಲ್ಲೆಯ ಮುಲ್ಕಿಯಲ್ಲಿ ೩೦ ಸೆಂಟಿಮೀಟರ್, ಭಾಗಮಂಡಲದಲ್ಲಿ ೧೧ ಸೆಂಟಿಮೀಟರ್ ಮಳೆಯಾಗಿದೆ. ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ಇಂದಿನಿಂದ ಇದೇ ೨೩ ರವರೆಗೆ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉತ್ತರ ಒಳನಾಡಿನಲ್ಲಿಯೂ ಮಳೆಯಾಗಲಿದೆ. ಉತ್ತರಕನ್ನಡ, ಉಡುಪಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಹಾಗೂ ಕೊಡಗು ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗಲಿದ್ದು, ಇದೇ ೨೧ರವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿನಲ್ಲಿಯೂ ಇದೇ ೨೧ರವರೆಗೆ ಹಗುರದಿಂದ ಮಳೆಯಾಗಲಿದೆ. ಉತ್ತರ ಕನ್ನಡ ಜಿಲ್ಲೆಯ ಹಲವೆಡೆ ನಿರಂತರ ಮಳೆ ಸುರಿಯುತ್ತಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಹಾಗೂ ಭಟ್ಕಳ ತಾಲೂಕುಗಳ ಶಾಲೆಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯ ಆದೇಶಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಳೆ ಬಿರುಸುಗೊಂಡಿದೆ. ಕಳೆದ ಕೆಲವು ದಿನಗಳಿಂದ ಭಾರೀ ಮಳೆಯಾಗುತ್ತಿದ್ದು ಇಂದು ಕೂಡ ಮುಂದುವರಿದಿದೆ. ಧಾರಾಕಾರವಾಗಿ ಸುರಿಯುತ್ತಿರುವ ಮಳೆಯ ಕಾರಣ ಮುಂಜಾಗ್ರತಾ ಕ್ರಮವಾಗಿ ಇಂದು ಜಿಲ್ಲೆಯ ಎಲ್ಲಾ ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಜನತೆ ನದಿ ಮತ್ತು ಕಡಲ ತೀರದತ್ತ ತೆರಳದೆ ಎಚ್ಚರಿಕೆ ವಹಿಸಬೇಕು. ಮೀನುಗಾರರು ಯಾವುದೇ ಕಾರಣಕ್ಕೂ ಮೀನುಗಾರಿಕೆಗೆ ತೆರಳಬಾರದು ಎಂದು ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ಮುನ್ನೆಚ್ಚರಿಕೆ ನೀಡಿದ್ದಾರೆ. ಈ ನಡುವೆ ಮಳೆಯಿಂದ ಹಾನಿ ಪ್ರದೇಶಗಳಿಗೆ ಜಿಲ್ಲಾಧಿಕಾರಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಉಡುಪಿ ಜಿಲ್ಲೆಯಾದ್ಯಂತ ನಿರಂತರವಾಗಿ ಮಳೆ ಆಗುತ್ತಿರುವುದರಿಂದ ಜಿಲ್ಲೆಯ ಎಲ್ಲಾ ಜಿಲ್ಲೆಯ ಎಲ್ಲ ಶಾಲಾ ಕಾಲೇಜುಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ. ಉಡುಪಿ ಜಿಲ್ಲೆಯ ಗಂಗೊಳ್ಳಿಯಲ್ಲಿ ಮೀನುಗಾರಿಕೆಗೆ ತೆರಳಿ ದೋಣಿ ಮುಗುಚಿ ನಾಪತ್ತೆಯಾಗಿದ್ದ ಮೂವರು ಮೀನುಗಾರರ ನಿಧನಕ್ಕೆ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸಂತಾಪ ಸೂಚಿಸಿದ್ದಾರೆ. ಸರ್ಕಾರದಿಂದ ನಿಯಮಾನುಸಾರ ಪರಿಹಾರ ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಕೊಪ್ಪಳ ಜಿಲ್ಲೆಯಲ್ಲೂ ಭಾರೀ ಮಳೆಯಾಗುತ್ತಿದ್ದು, ಕಳೆದ ರಾತ್ರಿ ಮನೆ ಗೋಡೆ ಕುಸಿದು ೨ ವರ್ಷದ ಬಾಲಕಿ ಮೃತಪಟ್ಟಿದ್ದಾರೆ. ಘಟನಾ ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿ, ನೈಸರ್ಗಿಕ ವಿಕೋಪ ಪರಿಹಾರ ನಿಧಿಯಿಂದ ೫ ಲಕ್ಷ ಪರಿಹಾರ ಘೋಷಿಸಲಾಗಿದೆ.

<><><><>

ಲಿಂಗನಮಕ್ಕಿ ಜಲಾಶಯದಿಂದ ಯಾವುದೇ ಸಂದರ್ಭದಲ್ಲಿ ನೀರು ಹೊರ ಬಿಡುವ ಸಾಧ್ಯತೆ ಇದೆ. ಆದ್ದರಿಂದ ನದಿ ಪಾತ್ರದ ಜನರು ಸುರಕ್ಷಿತ ಸ್ಥಳಗಳಿಗೆ ತೆರಳಬೇಕು, ಪ್ರವಾಸಿಗರು ನದಿಗೆ ಇಳಿಯಬಾರದು ಎಂದು ಕರ್ನಾಟಕ ವಿದ್ಯುತ್ ನಿಗಮ ಎಚ್ಚರಿಕೆ ನೀಡಿದೆ. ಒಳ ಹರಿವು ಮುಂದುವರೆದರೆ ಜಲಾಶಯದ ನೀರಿನ ಮಟ್ಟ ಗರಿಷ್ಠ ಮಟ್ಟಕ್ಕೆ

ತಲುಪಲಿದೆ. ಜಲಾಶಯದ ಸುರಕ್ಷತೆ ದೃಷ್ಟಿಯಿಂದ ಯಾವುದೇ ಸಂದರ್ಭದಲ್ಲಿ ಗೇಟ್‌ಗಳ ಮೂಲಕ ನೀರನ್ನು ಹೊರ ಬಿಡುವ ಸಾಧ್ಯತೆ ಇದೆ ಎಂದು ಕೆಪಿಸಿಯ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

<><><><>

ಮೈಸೂರಿನ ಚಾಮುಂಡಿಬೆಟ್ಟದಲ್ಲಿ ನಾಡ ಅಧಿದೇವತೆ ಚಾಮುಂಡೇಶ್ವರಿ ತಾಯಿಯ ವರ್ಧಂತಿ ಉತ್ಸವ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಇಂದು ವಿಜೃಂಭಣೆಯಿಂದ ನೆರವೇರಿತು. ಮೈಸೂರು ರಾಜವಂಶಸ್ಥರ ಕುಲದೇವತೆಯಾದ ಚಾಮುಂಡೇಶ್ವರಿಯ ವರ್ಧಂತಿ ಉತ್ಸವದ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಗಳು ನಡೆಯಿತು. ದೇವಿಯ ಮೂರ್ತಿಗೆ ಬೆಟ್ಟದಲ್ಲಿರುವ ದೇವಿ ಕೆರೆಯಿಂದ ತಂದ ಶುದ್ಧ ಜಲದಿಂದ ಅಭಿಷೇಕ ಮಾಡಿ ಬಳಿಕ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ  ಬಳಿಕ ವಿವಿಧ ಹೂವುಗಳಿಂದ ಅಲಂಕಾರ ಮಾಡಿ ಕುಂಕುಮಾರ್ಚನೆ, ಸಹಸ್ರನಾಮಾರ್ಚನೆ  ನೆರವೇರಿಸಲಾಯಿತು. ದೇವಸ್ಥಾನದ ಮುಂಭಾಗದಲ್ಲಿ ಚಿನ್ನದ ಪಲ್ಲಕ್ಕಿಯಲ್ಲಿ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಿ ಮೆರವಣಿಗೆ ಮಾಡಲಾಯಿತು. ಅರಮನೆ ಪೊಲೀಸ್ ಬ್ಯಾಂಡ್ ಜೊತೆಗೆ ಮಂಗಳವಾದ್ಯದ ಮೂಲಕ ವಿಜೃಂಭಣೆಯಿಂದ ಮೆರವಣಿಗೆ ನಡೆಯಿತು.

<><><><>

ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಭಾಗದಲ್ಲಿ ವಾಹನಗಳ ದಟ್ಟಣೆ ನಿಯಂತ್ರಿಸಲು ಜಿಲ್ಲಾಡಳಿತ ವಾಹನಗಳಿಗೆ ಎರಡು ವಿಭಾಗಗಳಲ್ಲಿ ಅವಕಾಶ ಮಾಡಿಕೊಡಲು ನಿರ್ಧರಿಸಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಗಿರಿಮಾರ್ಗದಲ್ಲಿ ಕಳೆದ ಆರು ತಿಂಗಳಲ್ಲಿ ಎರಡೂವರೆ ಲಕ್ಷದಷ್ಟು ವಾಹನಗಳ ಸಂಚಾರ ಕಂಡುಬಂದಿದೆ. ಗಿರಿ ರಸ್ತೆ ಅತ್ಯಂತ ಕಿರಿದಾಗಿರುವುದರಿಂದ ಸಮಸ್ಯೆಯಾಗುತ್ತಿದ್ದು, ಭೂಗರ್ಭ ಶಾಸ್ತ್ರಜ್ಞರು ಭೂಕುಸಿತದ ಬಗ್ಗೆ ವರದಿ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಬೆಳಿಗ್ಗೆ ೬ ಗಂಟೆಯಿಂದ ಮಧ್ಯಾಹ್ನ ೧೨ರವರೆಗೆ ೬೦೦ ವಾಹನಗಳನ್ನು ಹಾಗೂ ಮಧ್ಯಾಹ್ನ ೧ ಗಂಟೆಯಿಂದ ಸಂಜೆ ೬ ಗಂಟೆವರೆಗೆ ೬೦೦ ವಾಹನಗಳನ್ನು ಬಿಡಲು ನಿರ್ಧರಿಸಲಾಗಿದೆ. ಮಧ್ಯಾಹ್ನ ಬಿಡುವು ನೀಡಲಾಗುವ ಒಂದು ಗಂಟೆ ಅವಧಿಯಲ್ಲಿ ಗಿರಿಗೆ ತೆರಳುವ ವಾಹನಗಳು ಮರಳಿ ಬರಲು ಅವಕಾಶ ಕಲ್ಪಿಸಲಾಗುವುದು ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದ್ದಾರೆ.

<><><><>

ಪೊಲೀಸ್ ವ್ಯವಸ್ಥೆಯಲ್ಲಿ ಸಮುದಾಯದ ಪಾಲ್ಗೊಳ್ಳುವಿಕೆ ಹೆಚ್ಚಿಸಿ, ಸಮಸ್ಯೆಗಳನ್ನು ಮೂಲದಲ್ಲೇ ಸರಿಪಡಿಸುವುದು 'ಮನೆ ಮನೆ ಪೊಲೀಸ್' ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ ಎಂದು ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, 'ಮನೆ ಮನೆಗೆ ಪೊಲೀಸ್' ಕಾರ್ಯಕ್ರಮದಡಿ ಪೊಲೀಸರು ಮನೆಗಳಿಗೆ ಭೇಟಿ ನೀಡಿದಾಗ ಅಪರಾಧ ಕೃತ್ಯಗಳನ್ನು ತಡೆಯುವ ಬಗ್ಗೆ ಮಾಹಿತಿ ನೀಡಬೇಕು. ಸೈಬರ್ ವಂಚನೆ ಪ್ರಕರಣಗಳಿಂದ ಹೇಗೆ ದೂರವಿರಬೇಕು ಎಂಬ ಸಲಹೆಗಳನ್ನು ಒದಗಿಸಬೇಕು ಎಂದು ಸೂಚಿಸಿದ್ದಾರೆ.

ಧ್ವನಿ : ಉಮಾ ಪ್ರಶಾಂತ್ (೪೦ ಸೆಕೆಂಡ್‌ಗಳು)

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>